ಮೈಸೂರ್ ಸಬ್ ಜಡ್ಜಿಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ಮೈಸೂರು ತಾಲ್ಲೂಕು ಕಾಯುಂಗುತ್ತಾ ವುದಯೂರು ಗ್ರಾಮದಲ್ಲಿ ಇರುವ ದಿವಾಕರದ ಹೊನ್ನಪ್ಪನ ವಿಷಯದಲ್ಲಿ—

ಸ್ಯ 1896—97ನೇ ಇಸವಿ ದಿವಾಳಿ ಕೇಸ್ ನಂಬರ್ 422.

ಹುಕುಂ.

ಮೇಲ್ಕಂಡ ಹೊನ್ನಪ್ಪನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜಿ ಅಂಕವು ಈ ಕೋರ್ಟು ರೂಬರೂ ಅರ್ಜೀದಾರನಾದ ಹೊನ್ನಪ್ಪನ ಪರವಾಗಿ ಫಸ್ಟ್‌ಗ್ರೇಡ್ ಪ್ಲೀಡರ್ ವೆಂಕಟರಾಮಯ್ಯನವರನ್ನೂ ಮತ್ತು ಸದರೀಯವನ ಲೇಣೇದಾರ್‌ರಾದವರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್‌ರು ತಮಗೆ ಈ ದರ್ಯಾಫ್ತೀ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು ಯಾರಂದರೆ,—1ನೇ ಮೈಸೂರು ಕಿಲ್ಲೆಯಲ್ಲಿರುವ ಕೃಷ್ಣೀ ಅರಸಿನವರು.

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರಿ ದಿವಾಕರದ ಹೊನ್ನಪ್ಪನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳಿಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳಿಯಾದವನ್ನ ನಿರ್ಬಂಧದಿಂದ ವಿವೋಜನೆ ಮಾಡಿರುವದಲ್ಲದೆ ಇದಕ್ಕೆ ಲಗ್ನತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ವತಂತ್ರವಾಗಿಯಾಗಲಿ ದಸ್ತಗಿರಿ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವನ್ನ ನಿರ್ಮಾಲಸ್ ಮಾಡಲಾಗಿರುತ್ತೆಯಂದು ಇದರಿಂದ ಹುಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1896ನೇ ಇಸವಿ ಜುಲೈ 27ನೇ ತಾರೀಖಿನಲ್ಲಿ ಈ ಕೋರ್ಟಿನ ಮೊಹರ್ ನಮ್ಮ ದಸ್ತಖತ್‌ನಿಂ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರು.	ಲೇಣೇದಾರ್‌ರು ಅಥವಾ ದಾವಾದಾರ್‌ರ ಹೆಸರು ಮತ್ತು ವಿವರ ಮತ್ತು ಹಾಲಿ ತಿಳಿಯಬಂದ ಅವರುಗಳ ವಾಸಸ್ಥಳ.	ಜೊಬಲಗು.	ಯಾವಾಗ ದೇಣೇ ಮಾಡಿಕೊಂಡದ್ದು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿಯೇನಾದರೂ ಇದ್ದರೆ.	ಷರಾ.
1	ಮೈಸೂರು ಕಿಲ್ಲೇಲಿರುವ ಕೃಷ್ಣೀ ಅರಸಿನವರು	250	..	ಡಿಕ್ರಿ ಬಾಬತು	

ಎಸ್. ಆರ್. ಸುಬ್ಬರಾಯುಅಯ್ಯರ್,
ಸಬ್ ಜಡ್ಜ.

ಮೈಸೂರ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ಪ್ರಸಿದ್ಧಪತ್ರಿಕೆ.

ತಾರೀಖು 12ನೇ ಜುಲೈ 1896.

1 ಕಂದಾಯದ ಬಾಕೀದಾರರಾದ ಮೈಸೂರು ವಗೈರೆ ಗ್ರಾಮದ ಕೊವಾರ ತಿರನಾರಣಯ್ಯಂಗಾರ್ ವಗೈರೆಯವರಿಂದ ಬರಬೇಕಾದ ಜಮ್ಮಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಸರಕಾರ್‌ಕ್ಕೆ ಕೇರಿಸಿಕೊಳ್ಳಲ್ಪಟ್ಟ ಸ್ಥಿರಸ್ವತ್ತು ಮೈಸೂರ್ ಡಿಸ್ಟ್ರಿಕ್ಟ್ ಯಡತೊರೆ ತಾಲ್ಲೂಕು ಸರ್ವೆ ಮಾನ್ಯ ಹಳೆಯೂರು, ಹೊಸೂರು ಗ್ರಾಮದಲ್ಲಿ 1896ನೇ ಸೆಪ್ಟಂಬರ್ 5ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜ್ ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿದೆ.

2 ಹರಾಜು ಡೆಪ್ಯೂಟಿ ಕಮಿಷರ್ ಸಾಹೆಬರವರು ಅಥವಾ ಅಸಿಸ್ಟೆಂಟ್ ಕಮಿಷರ್ ಸಾಹೆಬರವರಿಂದ ಆ ತಾರೀಖು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕಪಂ ಜಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

3. ಸದರೀ ಸ್ವತ್ತಿಗಾಗಿ ಹರಾಜುದಾರನು 1896ನೇ ಸಾಲಿಗೆ ಪೂರ್ತಿಯಾಗಿ * ಮನ್ಮಥ ಸಂವತ್ಸರಕ್ಕೆ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಖ್ಮೀಲ್ ಮೇರಿಗೆ 393—15—8 ರೂಪಾಯಿ ಆಗಿರುತ್ತೆ.

4. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಯನ್ನ ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೆ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದು ಕೊಳ್ಳಲು ಗುರಿಯಾಗುತ್ತಾನೆ.

5. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಪಿಜಂಟ್ ಯಾ ಹುತ್ತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ ಇತರರಿಗೋಸ್ಕರ ಮುತಾಲೀ